ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE

# ಸಾರಿಗೆ ಮುಷ್ಕರ; ಎಸ್ಮಾ ಜಾರಿಗೊಳಿಸಿ

## ರಾಜ್ಯ ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ಹೈಕೋರ್ಟ್‌ಗೆ ಮತ್ತೊಂದು ಅರ್ಜಿ

ಬೆಂಗಳೂರು: ಸಾರಿಗೆ ನೌಕರರ ಮುಷ್ಕರ ತಡೆಹಿಡಿಯಲು ಅಗತ್ಯ ಸೇವೆಗಳ ನಿರ್ವಹಣಾ ಕಾಯ್ದೆಯನ್ನು (ಎಸ್ಮಾ) ಕಟ್ಟುನಿಟ್ಟಾಗಿ ಜಾರಿಗೊಳಿಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ಹೈಕೋರ್ಟ್‌ಗೆ ಮತ್ತೊಂದು ಅರ್ಜಿ ಸಲ್ಲಿಕೆಯಾಗಿದೆ.

ಈ ಕುರಿತು ನಗರದ ಟಿ.ಶ್ರೀನಿವಾಸ್ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದಾರೆ. ರಾಜ್ಯ ಸರ್ಕಾರ, ಸಾರಿಗೆ ಇಲಾಖೆ, ಗೃಹ ಇಲಾಖೆ, ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಎನ್‌ಡಬ್ಲ್ಯೂಕೆಎಸ್‌ಆರ್‌ಟಿಸಿ, ಎನ್‌ಇಕೆಆರ್‌ಟಿಸಿಯನ್ನು ಅರ್ಜಿಯಲ್ಲಿ ಪ್ರತಿವಾದಿ ಮಾಡಲಾಗಿದೆ. ಅರ್ಜಿ ಇನ್ನಷ್ಟೇ ವಿಚಾರಣೆಗೆ ಬರಬೇಕಿದೆ.

ಸಾರಿಗೆ ನೌಕರರ ಬಸ್ ಮುಷ್ಕರದಿಂದ ರಾಜ್ಯದ ಜನತೆಗೆ ತೀವ್ರ ತೊಂದರೆ ಉಂಟಾಗುತ್ತಿದೆ. ಅವರಿಗೆ ಸಿಗಬೇಕಾದ ಸಾರಿಗೆ ಸೌಲಭ್ಯ ಲಭ್ಯವಾಗುತ್ತಿಲ್ಲ.



ಮೋಟಾರು ವಾಹನ ಮೂಲಕ ವ್ಯಕ್ತಿ ಮತ್ತು ಸರಕುಗಳನ್ನು ಸಾಗಾಟ ಮಾಡುವುದು ಎಸ್ಮಾ ಕಾಯ್ದೆಯಡಿ ಬರುತ್ತದೆ. ಇಂತಹ ಪರಿಸ್ಥಿತಿಯಲ್ಲಿ ಎಸ್ಮಾ ಕಾಯ್ದೆ ಜಾರಿಗೊಳಿಸುವ ಸಂಪೂರ್ಣ ಅಧಿಕಾರ ಸರ್ಕಾರ ಹೊಂದಿದೆ. ಆದರೂ ಮುಷ್ಕರ ತಡೆಯಲು ಎಸ್ಮಾ ಕಾಯ್ದೆಯನ್ನು ಸರ್ಕಾರ ಜಾರಿ ಮಾಡುತ್ತಿಲ್ಲ. ಇದರಿಂದ ಸಮಸ್ಯೆ ಮತ್ತಷ್ಟು ಜಟಿಲವಾಗುತ್ತಿದೆ ಎಂದು ಅರ್ಜಿಯಲ್ಲಿ ತಿಳಿಸಲಾಗಿದೆ.

## ಮುಷ್ಕರ: ಶಾಶ್ವತ ಪರಿಹಾರಕ್ಕೆ ಸಮಿತಿ ರಚಿಸಲು ಕೋರಿ ಅರ್ಜಿ

ಬೆಂಗಳೂರು: ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ಬಸ್‌ಗಳ ಮುಷ್ಕರ ಹಿನ್ನೆಲೆಯಲ್ಲಿ, ಸಾರಿಗೆ ನೌಕರರ ಮತ್ತು ಸರ್ಕಾರದ ನಡುವೆ ಮಧ್ಯಸ್ಥಿಕೆ ವಹಿಸಿ, ಶಾಶ್ವತ ಪರಿಹಾರ ಸೂಚಿಸಲು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿಯೊಬ್ಬರ ನೇತೃತ್ವದಲ್ಲಿ ಸಮಿತಿ ರಚಿಸುವಂತೆ ಸರ್ಕಾರಕ್ಕೆ ನಿರ್ದೇಶಿಸಬೇಕೆಂದು ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆಯಾಗಿದೆ. ಈ ಕುರಿತು ಬೆಂಗಳೂರಿನ ವಕೀಲ ನಟರಾಜ ಶರ್ಮಾ ಈ ಅರ್ಜಿ ಸಲ್ಲಿಸಿದ್ದಾರೆ. ಸರ್ಕಾರದ ಮುಖ್ಯ ಕಾರ್ಯದರ್ಶಿ, ಸಾರಿಗೆ ಇಲಾಖೆ ಸಚಿವರು, ಪ್ರಧಾನ ಕಾರ್ಯದರ್ಶಿ, ಕೆಎಸ್‌ಆರ್‌ಟಿಸಿ, ಬಿಎಂಟಿಸಿ ವ್ಯವಸ್ಥಾಪಕರ ನಿರ್ದೇಶಕರು ಮತ್ತು ರಾಜ್ಯ ರಸ್ತೆ ಸಾರಿಗೆ ನೌಕರರ ಕೂಟದ ಅಧ್ಯಕ್ಷರನ್ನು ಅರ್ಜಿಯಲ್ಲಿ ಪ್ರತಿವಾದಿ ಮಾಡಲಾಗಿದೆ. ಅರ್ಜಿ ಇನ್ನಷ್ಟೇ ವಿಚಾರಣೆಗೆ ಬರಬೇಕಿದೆ.